2. ಎಂಡೋಸ್ಕೊಪಿ ಇವಿಇ ಪ್ರೊಸೆಸರ್ - 1 (ಒಂದು)

ಇವುಗಳನ್ನು ದುರಸ್ತಿ ಮಾಡುವುದಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ದುರಸ್ತಿ ಮಾಡಲು ತಗಲುವ ಅಂದಾಜು ವೆಚ್ಚದ ವಿವರಗಳು ಈ ಕೆಳಗಿನಂತಿವೆ.

1. ಇಮೇಜ್ ಇಂಟೆನ್ ಸಿಫಾರ್ ಟೆಲಿವಿಷನ್ ಯೂನಿಟ್ - ರೂ. 34,200-00

2. ಎಂಡೋಸ್ಕೊಪಿ ಇವಿಇ ಪ್ರೊಸೆಸರ್ - 958 ಯುಎಸ್ ಡಾಲರ್(ಸಿಐಎಫ್) (ರೂ. 76,362)

ಇವುಗಳ ದುರಸ್ತಿ ಬಗ್ಗೆ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ವಿಷಯ: ದ.ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಜವಹಾರ ರೋಜಗಾರ್ ಯೋಜನೆಯ ಅನುಷ್ಠಾನ

10 10 (1498)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) 1997-98ನೇ ಸಾಲಿನಲ್ಲಿ ದ.ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಜವಾಹರ್ ರೋಜಗಾರ್ ಯೋಜನೆಯಡಿ ಎಷ್ಟು ಜನ ನಿರುದ್ಯೋಗಿಗಳಿಗೆ (ಎಸ್.ಎಸ್.ಎಲ್.ಸಿ ಮತ್ತು ಪದವೀಧರರು) ಸ್ವಯಂ ಉದ್ಯೋಗಕ್ಕಾಗಿ ಸಾಲ ನೀಡಲಾಗಿದೆ.

ಆ) ಈ ಆಯ್ಕೆಯಲ್ಲಿ ಇರುವ ಸದಸ್ಯರುಗಳು ಯಾರು?

ಇ) ಅರ್ಹ ಫಲಾನುಭವಿಗಳಿಗೆ ಬ್ಯಾಂಕಿನವರು ಸಾಲ ಮಂಜೂರಾತಿ ಮಾಡುವ ಸಮಯದಲ್ಲಿ ಕಿರುಕುಳ ಕೊಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಜವಾಹರ್ ರೋಜ್‌ಗಾರ್ ಯೋಜನೆಯಡಿಯಲ್ಲಿ ಸಾಲ ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಆ) (ಅ) ಪ್ರಶ್ನೆ ರೀತ್ಯಾ ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ: ದ.ಕ. ಹಾಗೂ ಉಡುಪಿ ಜಿಲ್ಲೆಗಳಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ.

10 12 (150 1)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ತಾಲ್ಲೂಕು ಆಸ್ಪತ್ರೆಗಳಿಗೆ ಮಂಜೂರಾದ ವೈದ್ಯರುಗಳು ಮತ್ತು ವೈದ್ಯೇತರರುಗಳ ಸಂಖ್ಯೆ ಎಷ್ಟು?

ಆ) ಇಷ್ಟು ಖಾಲಿ ಹುದ್ದೆ ಇರುವುದರಿಂದ ದೈನಂದಿನ ಕೆಲಸಗಳಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ?

ಇ) ಬಂದಿದ್ದಲ್ಲಿ ಸರ್ಕಾರದವರು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) **ದಕ್ಷಿಣ ಕನ್ನಡ ಜಿಲ್ಲೆ**

1. ವೈದ್ಯರುಗಳು	:	114
2. ವೈದ್ಯೇತರರು	:	1451

ಉಡುಪಿ ಜಿಲ್ಲೆ

1. ವೈದ್ಯರು	:	107
2. ವೈದ್ಯೇತರರು	:	879

ಆ) ಬಂದಿದೆ.

ಇ) ಗ್ರಾಮಾಂತರ ಪ್ರದೇಶದಲ್ಲಿ ವೈದ್ಯರುಗಳ ಕೊರತೆ ನಿವಾರಿಸಲು ಹತ್ತಿರವಿರುವ ಪ್ರಾಥಮಿಕ ಆರೋಗ್ಯ ಕೇಂದ್ರ : ಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರುಗಳನ್ನು ಪ್ರಭಾರದ ಮೇಲೆ ನೇಮಕ ಮಾಡುವ ಮೂಲಕ ದೈನಂದಿನ ಕೆಲಸಗಳಿಗೆ